**ಕರ್ನಾಟಕಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/ಟಿಆರ್‌ಎನ್/24/2023-ಟಿಡಿಜಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:15.07.2023

**<u>ಸುತ್ತೋಲೆ</u>**

ವಿಷಯ: ಮಾರಣಾಂತಿಕ ಕಾಯಿಲೆಗಳ ಪ್ರಕರಣಗಳಡಿ ಕೋರಿಕೆ ವರ್ಗಾವಣೆಗೆ ಮನವಿ ಸಲ್ಲಿಸಿರುವ ಬೋಧಕರ ವೈದ್ಯಕೀಯ ಪರಿಶೀಲನೆಗೆ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸಮಸಂಖ್ಯೆಯ ವರ್ಗಾವಣೆ ಅಧಿಸೂಚನೆ ದಿ.05.07.2023.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಪತ್ರ ಸಂಖ್ಯೆ:ಎಂಇಬಿ(2):114/2023-24, ದಿ.13.07.2023.
3. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ:14.07.2023

******

ಇಲಾಖಾ ವ್ಯಾಪ್ತಿಯ ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕ ವರ್ಗದವರಿಗೆ ವರ್ಗಾವಣೆ ನಿಯಮಗಳನ್ವಯ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದ್ದು, ಮಾರಣಾಂತಿಕ ಕಾಯಿಲೆಗಳ ಹಿನ್ನಲೆಯಲ್ಲಿ ವರ್ಗಾವಣೆ ಬಯಸಿ ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸಿರುವ **ಬೋಧಕರು/ಬೋಧಕರ ಅವಲಂಬಿತರು (ಪತಿ/ಪತ್ನಿ/ಮಕ್ಕಳು ಮಾತ್ರ)** ವೈದ್ಯಕೀಯ ದಾಖಲೆಗಳೊಂದಿಗೆ ಅವರಿಗೆ ನಿಗದಿಪಡಿಸಿದ ದಿನಾಂಕಗಳಂದು ಬೆಳಿಗ್ಗೆ 9.30 ಗಂಟೆಗೆ ನಿಗದಿಪಡಿಸಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಹಾಜರಾಗಿ ವೈದ್ಯಕೀಯ ಪರಿಶೀಲನೆಗೆ ಒಳಪಡುವಂತೆ ಉಲ್ಲೇಖ (3)ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

**ಮುಂದುವರೆದು, ವೈದ್ಯಕೀಯ ಪರೀಕ್ಷೆಗೆ ಹಾಜರಾಗುವ ಬೋಧಕರು ಸರ್ಕಾರದಿಂದ ನಿಗದಿಪಡಿಸಿರುವ ನೊಂದಣಿ ಹಾಗೂ ಇತರೇ ಪರೀಕ್ಷಾ ಶುಲ್ಕಗಳನ್ನು ಸ್ವಯಂ ಭರಿಸತಕ್ಕದ್ದು ಎಂದು ಈ ಮೂಲಕ ತಿಳಿಸಲಾಗಿದೆ.**

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ

1. ವೈದ್ಯಕೀಯ ಪ್ರಕರಣದಡಿ ಅರ್ಜಿ ಸಲ್ಲಿಸಿರುವ ಬೋಧಕರಿಗೆ – ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ಕಛೇರಿ ಪ್ರತಿ.